# ಕೆಪಿಎಸ್‌ಸಿ ಗೊಂದಲ: ಸಿಎಸ್‌ಗೆ ಸೂಚನೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಗೆಜೆಟೆಡ್ ಪ್ರೊಬೇಷನರಿ 384 ಹುದ್ದೆಗಳಿಗೆ ನೇಮಕಾತಿಗೆ ಕೆಪಿಎಸ್‌ಸಿ ಡಿ. 29ರಂದು ನಡೆಸಿದ ಪೂರ್ವಭಾವಿ ಮರು ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಿ ಲೋಪದೋಷಗಳು ಕಂಡುಬಂದಿರುವ ಬಗ್ಗೆ ಪರಿಶೀಲಿಸಿ, ಚರ್ಚಿಸಬೇಕು ಎಂದು ಮುಖ್ಯ ಕಾರ್ಯದರ್ಶಿ (ಸಿ.ಎಸ್) ಶಾಲಿನಿ ರಜನೀಶ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದಾರೆ.

ಆ ಬೆನ್ನಲ್ಲೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಡಿಪಿಎಆರ್) ಕಾರ್ಯದರ್ಶಿಗೆ ಈ ಬಗ್ಗೆ ಸೂಚನೆ ನೀಡಿರುವ ಮುಖ್ಯ ಕಾರ್ಯದರ್ಶಿ, ಕೆಪಿಎಸ್‌ಸಿ ಕಾರ್ಯದರ್ಶಿಯಿಂದ ತಕ್ಷಣ ವರದಿ ಪಡೆದು ಚರ್ಚೆ ನಡೆಸಬೇಕು ಎಂದು ಸೂಚನೆ ನೀಡಿದ್ದಾರೆ.

‘ಈ ಹುದ್ದೆಗಳ ನೇಮಕಾತಿಗೆ ಆಗಸ್ಟ್ 27ರಂದು ನಡೆದಿದ್ದ ಪೂರ್ವಭಾವಿ ಪರೀಕ್ಷೆಯ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿನ ಅನೇಕ ಲೋಪದೋಷಗಳ ಬಗೆಗೆ ವ್ಯಕ್ತವಾದ ವಿರೋಧ ಹಾಗೂ ಪರೀಕ್ಷಾರ್ಥಿಗಳ ಒತ್ತಾಯಕ್ಕೆ ಮಣಿದು ಆಯೋಗವು ಡಿಸೆಂಬರ್ 29ರಂದು ನಡೆಸಿದ ಮರುಪರೀಕ್ಷೆಯ ಪಶ್ನೆ ಪತ್ರಿಕೆಗಳಲ್ಲೂ ಲೋಪ- ದೋಷಗಳು ಮರುಕಳಿಸಿವೆ. ಹೀಗಾಗಿ ಮತ್ತೆ ಪರೀಕ್ಷೆ ನಡೆಸುವಂತೆ ಆದೇಶ ನೀಡಬೇಕು’ ಎಂದು ಒತ್ತಾಯಿಸಿ ಸಾಹಿತಿ ಗೊ.ರು. ಚನ್ನಬಸಪ್ಪ ಅವರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದರು.

ಅಲ್ಲದೆ, ಮುಖ್ಯ ಕಾರ್ಯದರ್ಶಿಯನ್ನು ಭೇಟಿ ಮಾಡಿದ್ದ ರಾಜ್ಯ ದಲಿತ ಪದವೀಧರರ ಸಂಘದ ಅಧ್ಯಕ್ಷ ವಿ. ಲೋಕೇಶ್, ಮರು ಪರೀಕ್ಷೆ ನಡೆಸಬೇಕು ಅಥವಾ ಪೂರ್ವಭಾವಿ ಪರೀಕ್ಷೆ ಬರೆದ ಎಲ್ಲ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆ ಬರೆಯಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದ್ದರು.

ಈ ಗೊಂದಲಗಳ ಬೆನ್ನಲ್ಲೇ, ಮುಖ್ಯಮಂತ್ರಿಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಕೆಪಿಎಸ್‌ಸಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಡಿಪಿಎಆರ್ ಕಾರ್ಯದರ್ಶಿ, ಕನ್ನಡ ಮತ್ತು ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಮತ್ತು ನಿರ್ದೇಶಕರ ಜೊತೆ ಇದೇ 18ರಂದು ಸಭೆ ನಡೆಸಲು ಮುಖ್ಯ ಕಾರ್ಯದರ್ಶಿ ನಿರ್ಧರಿಸಿದ್ದಾರೆ.

ಗೊ.ರು. ಚನ್ನಬಸಪ್ಪ

ದೂರವಾಣಿ : ೦೮೦-೨೮೬೦೧೭೦೨ (ಮ)
೯೯೮೦೫ ೧೨೩೮೯ (ಮ)

EOHIalim/9283392/2025
15/01/25

ದಿನಾಂಕ: 11.1.2024

ಮಾನ್ಯಶ್ರೀ ಸಿದ್ಧರಾಮಯ್ಯನವರು
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ವಿಧಾನಸೌಧ, ಬೆಂಗಳೂರು

ಮಾನ್ಯರೆ,

**ವಿಷಯ: ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿರುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದಂತೆ –**

ಕರ್ನಾಟಕ ಲೋಕಸೇವಾ ಆಯೋಗ ಇತ್ತೀಚೆಗೆ ನಡೆಸಿದ ಸ್ಪರ್ಧಾತ್ಮಕ ಪೂರ್ವಭಾವಿ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳಲ್ಲಿ ಆಗಿರುವ ಪ್ರಮಾದಗಳನ್ನು ಕುರಿತು ಮಾಧ್ಯಮಗಳಲ್ಲಿ ಬಹಿರಂಗಗೊಂಡಿರುವ ವರದಿಗಳು ಆಘಾತಕಾರಿಯಾಗಿವೆ. ಈ ಸಂಬಂಧ ಅಖಿಲ ಕರ್ನಾಟಕ ವಿದ್ಯಾರ್ಥಿಗಳ ಸಂಘವು ಕನ್ನಡ ಮಾಧ್ಯಮದ ಪರೀಕ್ಷಾರ್ಥಿಗಳ ಪರವಾಗಿ ನಡೆಸಿರುವ ಪ್ರತಿಭಟನೆ ಮತ್ತು ಹೋರಾಟಗಳು ತಮ್ಮ ಗಮನಕೆ ಬಂದಿವೆ ಎಂದು ತಿಳಿದಿದ್ದೇನೆ.

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 27.08.2024 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿದ್ದ ಅನೇಕ ಲೋಪದೋಷಗಳ ಬಗೆಗೆ ವ್ಯಕ್ತವಾದ ವಿರೋಧ ಮತ್ತು ಪರೀಕ್ಷಾರ್ಥಿಗಳ ಒತ್ತಾಯಕ್ಕೆ ಮಣಿದು ಆಯೋಗವು ದಿ. 29.12.2024 ರಂದು ನಡೆಸಿದ ಮರುಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲೂ ಅದೇ ಲೋಪ-ದೋಷಗಳು ಮರುಕಳಿಸಿರುವುದು ನಿಜಕ್ಕೂ ದಿಗ್ಭ್ರಮೆಯುಂಟುಮಾಡುತ್ತದೆ.

ಆಯೋಗದಂತಹ ಹೊಣೆಗಾರ ವ್ಯವಸ್ಥೆಯೇ ಇಂತಹ ತಪ್ಪುಗಳನ್ನು ಎಸಗುತ್ತಿರುವುದು ಸರ್ಕಾರಕ್ಕೆ ಕಳಂಕ ತರುವ ಸಂಗತಿ. ಪ್ರಸ್ತಾಪಿತ ಪ್ರಶ್ನೆಪತ್ರಿಕೆಗಳನ್ನು ಮೂಲ ಕನ್ನಡದಲ್ಲೇ ಸಿದ್ಧಪಡಿಸುವಂತಾದರೆ ಇಂತಹ ಗೊಂದಲಗಳಿಗೆ ಅವಕಾಶವಿರುವುದಿಲ್ಲ. ಈ ಗೊಂದಲದಿಂದ ಕನ್ನಡ ಮಾಧ್ಯಮದ ಅದರಲ್ಲೂ ಗ್ರಾಮಾಂತರದ ಅಭ್ಯರ್ಥಿಗಳಿಗೆ ಆಗುವ ಅನ್ಯಾಯ ಅಪೇಕ್ಷಿತವಲ್ಲ.

ಆಯೋಗದ ಈ ತಪ್ಪಿನ ವಿರುದ್ಧ ಯುವಸಮುದಾಯ ಉದ್ವೇಗಕ್ಕೆ ಒಳಗಾಗುವುದು ಸಹಜ. ಈ ಸಹಜ ಉದ್ವೇಗದೊಡನೆ ಆಯೋಗವು ಚೆಲ್ಲಾಟ ನಡೆಸುವುದು ಅಕ್ಷಮ್ಯ.

ಆದುದರಿಂದ ತಾವು ತಕ್ಷಣವೇ ಗಮನ ಹರಿಸಿ, ಈ ಅವ್ಯವಸ್ಥೆಗೆ ಕಾರಣವಾದವರ ಮೇಲೆ ಸೂಕ್ತ ಶಿಸ್ತಿನ ಕ್ರಮಕೈಗೊಳ್ಳುವುದರ ಜೊತೆಗೆ ದಿನಾಂಕ: 29.12.2024 ರಂದು ನಡೆದ ಮರುಪರೀಕ್ಷೆಯ ಸಿಂಧುತ್ವವನ್ನು ರದ್ದುಗೊಳಿಸಿ, ದೋಷರಹಿತ ಪ್ರಶ್ನೆಪತ್ರಿಕೆಗಳಿಂದ ಮತ್ತೆ ಪರೀಕ್ಷೆ ನಡೆಸಲು ಆಯೋಗಕ್ಕೆ ಕಟ್ಟುನಿಟ್ಟಿನ ಆದೇಶ ನೀಡಬೇಕಾಗಿ ಕೋರುತ್ತೇನೆ.

ಇದು ಸಹಸ್ರಾರು ಗ್ರಾಮೀಣ ಮತ್ತು ಕನ್ನಡ ಮಾಧ್ಯಮದ ಅಭ್ಯರ್ಥಿಗಳ ಭವಿಷ್ಯದ ಪ್ರಶ್ನೆಯಾಗಿದ್ದು, ಈ ಸಮಸ್ಯೆಯು ಉಲ್ಬಣವಾಗದಂತೆ ಈ ಸಂಬಂಧ ಅಖಿಲ ಕರ್ನಾಟಕ ವಿದ್ಯಾರ್ಥಿಗಳ ಸಂಘಟನೆಯು ನಡೆಸಿರುವ ಹೋರಾಟದ ನ್ಯಾಯಯುತ ಬೇಡಿಕೆಯನ್ನು ತಾವು ಈಡೇರಿಸುವಿರೆಂಬ ವಿಶ್ವಾಸ ಹೊಂದಿದ್ದೇನೆ.

ತಮ್ಮ ವಿಶ್ವಾಸಿ

KPSC Say

(ಡಾ. ಶಾಲಿನಿ ರಜನೀಶ್)
ಮುಖ್ಯ ಕಾರ್ಯದರ್ಶಿ

ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಕಛೇರಿ
ಪತ್ರ / ಕಡತ ಸ್ವೀಕರಿಸಲಾಗಿದೆ
ದಿನಾಂಕ: 16/1/25

ವಿಜಯವಾಣಿ
ನಂ.1
ಕನ್ನಡ ದಿನಪತ್ರಿಕೆ

### ಕೆಎಎಸ್ ಮರು ಪೂರ್ವಭಾವಿ ಪರೀಕ್ಷೆ ಆಕಾಂಕ್ಷಿಗಳ ಆಗ್ರಹ | ನ್ಯಾಯಕ್ಕಾಗಿ ಹೋರಾಟ

# ಮರು ಪರೀಕ್ಷೆ, ಇಲ್ಲ ಮೇನ್ ಚಾನ್ಸ್

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕನ್ನಡ ಭಾಷಾಂತರದಿಂದ ಕನ್ನಡ ಮತ್ತು ಗ್ರಾಮೀಣ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವ ಕಾರಣ ಕೆಎಎಸ್ ಪೂರ್ವಭಾವಿ ಪರೀಕ್ಷೆಯನ್ನು ಮತ್ತೊಮ್ಮೆ ನಡೆಸಬೇಕು. ಇಲ್ಲವಾದಲ್ಲಿ ಪರೀಕ್ಷೆಗೆ ಹಾಜರಾಗಿರುವ ಎಲ್ಲರಿಗೂ ಮುಖ್ಯ ಪರೀಕ್ಷೆಗೆ ಅನುಮತಿ ನೀಡಬೇಕು ಎಂದು ಆಗ್ರಹಿಸಿ ನೂರಾರು ಆಕಾಂಕ್ಷಿಗಳು ಸ್ವಾತಂತ್ರ್ಯ ಉದ್ಯಾನದಲ್ಲಿ ಗುರುವಾರ ಹೋರಾಟ ನಡೆಸಿದರು.

ಕೆಪಿಎಸ್ಸಿ ಪ್ರತಿ ಬಾರಿ ಇದೇ ರೀತಿ ಉದ್ಧಟತನ ತೋರುತ್ತಿದೆ. ಆದ್ದರಿಂದ ಮೊದಲು ಕನ್ನಡ ಅವಾಂತರಗಳಿಗೆ ಉತ್ತರ ನೀಡಬೇಕು ಬಳಿಕ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಆಹ್ವಾನಿಸುವ ಕೆಲಸ ಮಾಡಬೇಕು. ಇಲ್ಲವಾದಲ್ಲಿ ರಾಜ್ಯದ ಅಭ್ಯರ್ಥಿಗಳಿಗೆ ಅನ್ಯಾಯವಾಗಲಿದೆ ಎಂದು ಆಗ್ರಹಿಸಿದರು.

ಹೋರಾಟಕ್ಕೆ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ವಿಜಯೇಂದ್ರ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಎಎಪಿ ಮುಖಂಡ ಮುಖ್ಯಮಂತ್ರಿ ಚಂದ್ರು, ರಾಜ್ಯ ರೈತ ಸಂಘದ (ಹಸಿರು ಸೇನೆ) ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ಸೇರಿ ಹಲವು ಸಂಘಟನೆಗಳು ಸಾಥ್ ನೀಡಿದವು.

**ತಪಸ್ಸಿಗೆ ಕೆಪಿಎಸ್ಸಿ ಬೆಂಕಿ:** ಹೋರಾಟಗಾರರನ್ನು ಉದ್ದೇಶಿಸಿ ಮಾತನಾಡಿದ ವಿಜಯೇಂದ್ರ, ಕೆಪಿಎಸ್ಸಿಯು ರಾಜ್ಯದ ಸರ್ಕಾರಿ ಹುದ್ದೆ ಆಕಾಂಕ್ಷಿಗಳ ಭವಿಷ್ಯ ರೂಪಿಸಬೇಕಿತ್ತು. ಆದರೆ, ಪ್ರತಿ ಬಾರಿ ಪರೀಕ್ಷೆ ನಡೆಸುವಲ್ಲಿ ವಿಳಂಬ, ಅಧಿಸೂಚನೆ, ಪರೀಕ್ಷೆ, ಫಲಿತಾಂಶ ಪ್ರಕಟಿಸುವುದು ವಿಳಂಬ ಸೇರಿ ಪ್ರತಿ ಹಂತದಲ್ಲಿ ನಿಧಾನಗತಿ ಅನುಸರಿಸುತ್ತಿರುವ ಕಾರಣ, ಸರ್ಕಾರಿ ಹುದ್ದೆ ಪಡೆಯಬೇಕೆಂಬ ಗುರಿಯಿಂದ ತಪಸ್ಸಿನಂತೆ ಓದುವ ರಾಜ್ಯದ ಯುವಕರ ತಪಸ್ಸಿಗೆ ಬೆಂಕಿ ಇಡುವ ಕೆಲಸವನ್ನು ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಿಂದೆ ನಮ್ಮ ಸರ್ಕಾರವಿದ್ದಾಗಲೂ ಕೆಪಿಎಸ್ಸಿ ಅವಾಂತರಗಳಾಗಿವೆ. ಭಾಷಾಂತರ ಲೋಪ ಆಗಿದೆ. ಆದ್ದರಿಂದ ಮಾಧ್ಯಮಗಳಲ್ಲಿ ಸುದ್ದಿ ಪ್ರಕಟವಾದ ತಕ್ಷಣಕ್ಕೆ ನ್ಯಾಯ ದೊರೆಯುವುದಿಲ್ಲ. ನ್ಯಾಯ ಸಿಗುವ ತನಕ, ರಾಜ್ಯ ಸರ್ಕಾರ ಎಚ್ಚೆತ್ತುಕೊಳ್ಳುವ ತನಕ, ಮಾನವೀಯತೆಯಿಂದ ವರ್ತಿಸುವ ತನಕ ಹೋರಾಟ ನಿಲ್ಲಬಾರದು. ನಿಮ್ಮ ಹೋರಾಟಕ್ಕೆ ಬಿಜೆಪಿ ಎಂದಿಗೂ ಜತೆಯಲಿರಲಿದೆ ಎಂಬ ಭರವಸೆ ನೀಡಿದರು.

ಬಿಜೆಪಿ ಯುವ ಘಟಕದ ರಾಜ್ಯಾಧ್ಯಕ್ಷ ಧೀರಜ್ ಮುನಿರಾಜ್, ಹೋರಾಟಗಾರರಾದ ಮಾರಸಂದ್ರ ಮುನಿಯಪ್ಪ, ಕರ್ನಾಟಕ ರಾಜ್ಯ ವಿದ್ಯಾರ್ಥಿಸಂಘಟನೆಯ ಕಾಂತರಾಜು ಸೇರಿ ಹಲವು ಭಾಗವಹಿಸಿದ್ದರು.




ಫ್ರೀಡಂ ಪಾರ್ಕ್‌ಗೆ ಭೇಟಿ ನೀಡಿದ ವಿಜಯೇಂದ್ರ ಅವರಿಗೆ ಉದ್ಯೋಗಾಕಾಂಕ್ಷಿಗಳು ಮನವಿ ಸಲ್ಲಿಸಿದರು. ಛಲವಾದಿ ನಾರಾಯಣಸ್ವಾಮಿ ಮತ್ತಿತರರು ಇದ್ದರು.

> ಅನುವಾದ ಬಾರದ ಮೂರ್ಖ ಶಿಖಾಮಣಿಗಳನ್ನು ನೇಮಕ ಮಾಡಿಕೊಳ್ಳುವುದನ್ನು ಕೆಪಿಎಸ್‌ಸಿ ಬಿಡದಿದ್ದರೆ, 2010ರ ರೀತಿಯ ಹೋರಾಟಕ್ಕೆ ಮತ್ತೆ ಮುಂದಾಗಬೇಕಾಗುತ್ತದೆ.
>
> | **ಕೋಡಿಹಳ್ಳಿ ಚಂದ್ರಶೇಖರ್** ರೈತ ಮುಖಂಡ

### ಅಧಿಕಾರಿಗಳ ಅಮಾನತು ಮಾಡಿ

ಪ್ರಶ್ನೆಪತ್ರಿಕೆಯಲ್ಲಿ ಕನ್ನಡ ಭಾಷೆಗೆ ಅಪಮಾನ ಮಾಡಿರುವ ಕೆಪಿಎಸ್ಸಿ ಆಯೋಗದ ಪರೀಕ್ಷ ನಿಯಂತ್ರಕ ಜ್ಞಾನೇಂದ್ರ ಕುಮಾರ್ ಗಂಗವಾಲ್ ಹಾಗೂ ಸಿಬ್ಬಂದಿಯನ್ನು ಕೂಡಲೇ ಅಮಾನತು ಮಾಡಬೇಕು ಎಂದು ಎಎಪಿ ಮುಖಂಡ ಮುಖ್ಯಮಂತ್ರಿ ಚಂದ್ರು ಆಗ್ರಹಿಸಿದರು. ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲಾತಿ ಕಾಯ್ದೆಯನ್ನು ಕೂಡಲೇ ಜಾರಿಗೆ ತರಬೇಕು, ಕೆಪಿಎಸ್ಸಿ ಆಯೋಗವನ್ನು ಆಮೂಲಾಗ್ರ ಸುಧಾರಣೆ ಮಾಡಬೇಕು, ಬ್ಯಾಂಕ್, ರೈಲ್ವೆಗಳ ನೇಮಕಾತಿ ಪರೀಕ್ಷೆಗಳಲ್ಲಿ ಕನ್ನಡ ಭಾಷೆಗೆ ಆದ್ಯತೆ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

### 'ಅಜ್ಞಾನೇಂದ್ರ'ನ ಬದಲಿಸಿ

ಆಗಸ್ಟ್‌ನಲ್ಲಿ ನಡೆದ ಕೆಎಎಸ್ ಪೂರ್ವಭಾವಿ ಪರೀಕ್ಷೆಯಲ್ಲಿ 57 ಪ್ರಶ್ನೆಗಳು, ಡಿಸೆಂಬರ್‌ನಲ್ಲಿ ನಡೆದ ಮರು ಪರೀಕ್ಷೆಯಲ್ಲಿ 36 ಪ್ರಶ್ನೆಗಳು ತಪ್ಪಾಗಿವೆ. ಇದಕ್ಕೆಲ್ಲ ಪರೀಕ್ಷಾ ನಿಯಂತ್ರಕನಾಗಿ ಕಾರ್ಯನಿರ್ವಹಿಸುತ್ತಿರುವ ಜ್ಞಾನೇಂಧ್ರಕುಮಾರ್ ಕಾರಣವಾಗಿದ್ದಾರೆ. ಪ್ರಶ್ನೆಪತ್ರಿಕೆ ಸಿದ್ಧಪಡಿಸುವ ಪರೀಕ್ಷಾ ನಿಯಂತ್ರಕ ಜ್ಞಾನವಿಲ್ಲದ ಕಾರಣ ಸರಿಯಾದ ಜ್ಞಾನ ಇರುವವರನ್ನು ನೇಮಿಸುವಂತೆ ಪ್ರತಿಭಟನಕಾರರು ಒತ್ತಾಯಿಸಿದರು. ಕನ್ನಡದ ಕೊಲೆ ಮಾಡುವುದನ್ನು ಮತ್ತು ಸಮಜಾಯಿಷಿ ನೀಡುವುದನ್ನು ಮೊದಲು ನಿಲ್ಲಿಸಬೇಕು. ತಪ್ಪು ಎಲ್ಲರೂ ಮಾಡುತ್ತಾರೆ, ಅದನ್ನು ತಿದ್ದಿಕೊಳ್ಳುವ ಕೆಲಸ ಮಾಡಬೇಕು. ತಪ್ಪು ಪುನರಾವರ್ತನೆಯಾಗುತ್ತಿದ್ದರೆ ಹೋರಾಟ ಅನಿವಾರ್ಯ ಎಂದರು.

Bengaluru Edition
Jan 17, 2025 Page No. 6
Powered by: erelego.com

ಕನ್ನಡಪ್ರಭ

# ಕೆಪಿಎಸ್‌ಸಿ ಮರುಪರೀಕ್ಷೆಗೆ ಆಗ್ರಹಿಸಿ ಅಭ್ಯರ್ಥಿಗಳ ಧರಣಿ

## ತಪ್ಪೆಸಗುತ್ತಿರುವ ಅಧಿಕಾರಿಗಳ ವಜಾಕ್ಕೆ ಆಗ್ರಹ ಮುಖ್ಯಕಾರ್ಯದರ್ಶಿ ಭೇಟಿಯಾಗಿ ಮನವಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೆಎಎಸ್ ಹುದ್ದೆಗಳ ನೇಮಕಾತಿ ಪೂರ್ವ ಭಾವಿ ಮರು ಪರೀಕ್ಷೆಯಲ್ಲಿ ಭಾಷಾಂತರ ಲೋಪ ಹಿನ್ನೆಲೆಯಲ್ಲಿ ಪುನಃ ಪರೀಕ್ಷೆ ನಡೆಸಬೇಕು. ಇಲ್ಲವಾದಲ್ಲಿ ಪರೀಕ್ಷೆ ಎದು ರಿಸಿದ ಎಲ್ಲಾ ಅಭ್ಯರ್ಥಿ ಗಳಿಗೂ ಮುಖ್ಯ ಪರೀಕ್ಷೆ ಬರೆಯುವ ಅವಕಾಶ ನೀಡಬೇ ಕೆಂದು ಆಗ್ರಹಿಸಿ ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿ ಗಳ ಅಸೋಸಿಯೇಶನ್‌ನಿಂದ ಸ್ವಾತಂತ್ರ್ಯ ಉದ್ಯಾನದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಸಂಘಟನೆಯ ನಿಯೋಗ ರಾಜ್ಯ ಮುಖ್ಯ ಕಾರ್ಯದರ್ಶಿ ಭೇಟಿಯಾಗಿ ಮನವಿ ಸಲ್ಲಿಸಿ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿದರು. ಪದೇಪದೆ ಗೆಜೆ ಟೆಡ್ ಪ್ರೊಬೆಷನರಿ ಹುದ್ದೆಗಳ ಪರೀಕ್ಷೆಯಲ್ಲಿ ತಪ್ಪು ಎಸಗುತ್ತಿರುವ ಆಯೋಗದ ಪರೀಕ್ಷಾ ನಿಯಂತ್ರಕ ರಾದ ಜ್ಞಾನೇಂದ್ರ ಕುಮಾರ್‌ಗಂಗ್ವಾರ್‌ಮತ್ತು ಇತರೆ ಸಿಬ್ಬಂ ದಿಯನ್ನು ಅಮಾನತು ಗೊಳಿಸಬೇಕು. ನೇಮಕಾ ತಿಗಳನ್ನು ಅಧಿ ಸೂಚನೆ ಹೊರಡಿ ಸಿದ ವರ್ಷದೊಳಗೆ ನೇಮಕಾತಿ ಪ್ರಕ್ರಿ ಯೆಗಳನ್ನು ಪೂರ್ಣಗೊಳಿಸಿ ಆಯ್ಕೆ ಪಟ್ಟಿ ಬಿಡುಗಡೆಗೊಳಿಸಬೇಕು. ಕನ್ನಡದಲ್ಲಿ ಪ್ರಶ್ನೆ ಪತ್ರಿಕೆ ಸಿದ್ಧಗೊಳಿಸಿ ಭಾಷಾಂತರ ಮಾಡಬೇಕೆಂದು ಒತ್ತಾಯಿಸಿದರು..

ಈ ವೇಳೆ ಸಂಘಟನೆ ಅಧ್ಯಕ್ಷ ಕಾಂತ ಕುಮಾರ್, ಪ್ರಧಾನ ಕಾರ್ಯದರ್ಶಿ ಸಂಜಯ್ ಕುಮಾರ್ ಜೆ., ಉಪಾಧ್ಯಕ್ಷ ಶ್ರೇಯಸ್ ಎಂ.ಎಸ್. ಸೇರಿದಂತೆ ಹಲವರು ಉಪಸ್ಥಿತರಿದ್ದರು.

BENGALURU Edition
Jan 17, 2025 Page No. 08
Powered by: erelego.com

ಕನ್ನಡಪ್ರಭ

# ವಿದ್ಯಾರ್ಥಿಗಳನ್ನು ಬೀದಿಗಿಳಿಸಿದ ಸರ್ಕಾರ: ವಿಜಯೇಂದ್ರ ಟೀಕೆ

## ಕೆಪಿಎಸ್ಸಿ ಮರುಪರೀಕ್ಷೆ ಹೋರಾಟಕ್ಕೆ ಬೆಂಬಲ | ಸರ್ಕಾರ ವಿರುದ್ಧ ಆರೋಪ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೆಪಿಎಸ್‌ಸಿ ಪರೀಕ್ಷೆಯಲ್ಲಾಗುತ್ತಿರುವ ಸಮಸ್ಯೆಯಿಂದಾಗಿ ವಿದ್ಯಾರ್ಥಿಗಳು ಓದುವುದನ್ನು ಬಿಟ್ಟು ಬೀದಿಗಿಳಿದು ಹೋರಾಟ ನಡೆಸುವಂತೆ ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಿಡಿಕಾರಿದ್ದಾರೆ.

ಗುರುವಾರ ಫ್ರೀಡಂ ಪಾರ್ಕ್‌ನಲ್ಲಿ ವಿದ್ಯಾರ್ಥಿಗಳು ನಡೆಸುತ್ತಿರುವ ಹೋರಾಟಕ್ಕೆ ಮೇಲ್ಮನೆ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತಿತರರೊಂದಿಗೆ ತೆರಳಿ ಬೆಂಬಲ ಸೂಚಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಈ ವೇಳೆ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಕೆಪಿ ಎಸ್‌ಸಿ ಪರೀಕ್ಷೆಯಲ್ಲಾಗುತ್ತಿರುವ ತೊಂದರೆಗಳಿಂದ ವಿದ್ಯಾರ್ಥಿ ಗಳು ಪದೇ ಪದೆ ಸಂಕಷ್ಟ ಅನುಭವಿಸುತ್ತಿದ್ದಾರೆ. ವಿದ್ಯಾರ್ಥಿಗಳ ಹೋರಾಟಕ್ಕೆ ಪಕ್ಷದ ರಾಜ್ಯಾಧ್ಯಕ್ಷನಾಗಿಯಾಗಲಿ ಅಥವಾ ಶಾಸಕನಾಗಿ ಬಂದಿಲ್ಲ, ಬದಲಾಗಿ ದುಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ತಮ್ಮ ಹೋರಾಟಕ್ಕೆ ಧ್ವನಿಯಾಗಲು ಭಾಗವಹಿಸಿದ್ದೇನೆ ಎಂದು ಹೇಳಿದರು. ಅನೇಕ ವಿದ್ಯಾರ್ಥಿಗಳು ವಯಸ್ಸಿನ ಮಿತಿಯಿಂದ ಅರ್ಹತೆ ಕಳೆದುಕೊಳ್ಳುತ್ತಿದ್ದಾರೆ. ನಾನು ಮತ್ತು ನಮ್ಮ ಪಕ್ಷ ವಿದ್ಯಾರ್ಥಿಗಳಿಗೆ ನ್ಯಾಯ ಸಿಗುವವರೆಗೆ ಅವರೊಂದಿಗೆ ಇರುತ್ತೇವೆ ಎಂದು ಆಶ್ವಾಸನೆ ನೀಡಿದರು.

**ಸರ್ಕಾರ ನ್ಯಾಯ ನೀಡಬೇಕು- ಅಶೋಕ್:** ಕೆಪಿಎಸ್‌ಸಿ ನಡೆಸಿದ ದೋಷಪೂರಿತ ಕೆಎಎಸ್ ಪೂರ್ವಭಾವಿ ಪರೀಕ್ಷೆ ವಿಚಾರ ರಾಜ್ಯ ಸರ್ಕಾರ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕು ಮತ್ತು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, 2023–24ನೇ ಸಾಲಿನ ಕೆಎಎಸ್ ಪೂರ್ವಭಾವಿ ಪರೀಕ್ಷೆ ಎರಡು ಬಾರಿ ನಡೆಸಿದ್ದು, ಆಗಲೂ ಲೋಪದೋಷಗಳು ಕಂಡು ಬಂದಿದ್ದರಿಂದ ವಿಚಲಿತರಾಗಿ ಅಭ್ಯರ್ಥಿಗಳು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಆರಂಭಿಸಿದ್ದಾರೆ. ಮರುಪರೀಕ್ಷೆಯಲ್ಲಿ ಕಂಡು ಬಂದ ಲೋಪ ದೋಷಗಳ ಬಗ್ಗೆ ಅಭ್ಯರ್ಥಿಗಳು ಪದೇ ಪದೆ ಅಳಲು ತೋಡಿ ಕೊಂಡಿದ್ದಾರೆ. ಮರುಪರೀಕ್ಷೆ ನಡೆದು 15 ದಿನ ಕಳೆದರೂ ಈವರೆಗೆ ಆಕ್ಷೇಪಣೆಗಳಿಗೆ ಉತ್ತರ ನೀಡಿಲ್ಲ ಎಂದು ಹರಿಹಾಯ್ದರು.

BENGALURU Edition
Jan 17, 2025 Page No. 04
Powered by: erelego.com